ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 28/9/20

# ಮೇಲ್ಮನೆ ಸಭಾಪತಿ ಬದಲಿಸಲು ಬಿಜೆಪಿ ಚಿಂತನೆ

## ಪ್ರತಾಪ್‌ಚಂದ್ರ ವಿರುದ್ಧ ಬಿಜೆಪಿ ಅಸಮಾಧಾನ | ಜೆಡಿಎಸ್ ಬೆಂಬಲದೊಂದಿಗೆ ಹೊಸ ಆಯ್ಕೆ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್ ಅಧಿವೇಶನದಲ್ಲಿ ಭೂಸುಧಾರಣಾ ತಿದ್ದುಪಡಿಕಾಯ್ದೆ ಅನುಮೋದನೆ ಪಡೆಯದೆ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿದ ಬೆನ್ನಲ್ಲೇ ಆಕ್ರೋಶಗೊಂಡಿರುವ ಆಡಳಿತಾರೂಢ ಬಿಜೆಪಿಯಲ್ಲಿ ಪರಿಷತ್ತಿನ ಸಭಾಪತಿಯನ್ನು ಬದಲಾಯಿಸುವ ಆಲೋಚನೆ ಬಂದಿದೆ.

ಕಾಂಗ್ರೆಸ್‌ನ ಪ್ರತಾಪ್ ಚಂದ್ರ ಶೆಟ್ಟಿ ಸದ್ಯ ಮೇಲ್ಮನೆ ಸಭಾಪತಿಯಾಗಿದ್ದಾರೆ.

ಭಾನುವಾರ ಬೆಳಗ್ಗೆ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಅವರು ಪರಿಷತ್ತಿನ ಬಿಜೆಪಿ ಸದಸ್ಯರೊಂದಿಗೆ ನಡೆಸಿದ ಉಪಾಹಾರ ಸಭೆಯಲ್ಲಿ ಸಭಾಪತಿಯನ್ನು ಬದಲಿಸುವ ವಿಷಯ ಪ್ರಸ್ತಾಪವಾಗಿದ್ದು, ಹಿಂದಿನಂತೆ ಜೆಡಿಎಸ್ ಬೆಂಬಲದೊಂದಿಗೆ ಸಭಾಪತಿ



ಸ್ಥಾನವನ್ನು ವಶಪಡಿಸಿಕೊಳ್ಳುವ ಬಗ್ಗೆ ಗಂಭೀರ ಚರ್ಚೆ ನಡೆದಿದೆ ಎಂದು ತಿಳಿದುಬಂದಿದೆ.

ಆದರೆ, ಯಾವಾಗ ಮತ್ತು ಹೇಗೆ ಪ್ರಕ್ರಿಯೆ ಆರಂಭಿಸಬೇಕು ಎಂಬುದರ ಬಗ್ಗೆ ಅಂತಿಮ ನಿರ್ಧಾರ ಹೊರಹೊಮ್ಮಿಲ್ಲ. ಈ ಬಗ್ಗೆ ಮುಂದಿನ ದಿನಗಳಲ್ಲಿ ಪ್ರಕ್ರಿಯೆ ಆರಂಭಿಸಲಾಗುವುದು. ಅದಕ್ಕೂ ಮೊದಲು ಜೆಡಿಎಸ್ ನಾಯಕರೊಂದಿಗೆ ಒಂದು ಸುತ್ತಿನ ಮಾತುಕತೆ ನಡೆಸಲಾಗುವುದು. ಅವರ ಬೆಂಬಲ ಪಡೆದುಕೊಂಡ ಬಳಿಕವೇ ಸಭಾಪತಿಗಳ ಬದಲಾವಣೆಗೆ ಚಾಲನೆ ನೀಡಲಾಗುವುದು ಎಂದು ಸಭೆಯಲ್ಲಿ ಪಾಲ್ಗೊಂಡಿದ್ದ ಹಿರಿಯ ಸದಸ್ಯರೊಬ್ಬರು ಮಾಹಿತಿ ನೀಡಿದರು.

ಇದೇ ವೇಳೆ ಪರಿಷತ್ತಿನ ಸದಸ್ಯರಿಗೆ ಅನುದಾನ ನೀಡಬೇಕು, ಅವರವರ ವ್ಯಾಪ್ತಿಯ ಕ್ಷೇತ್ರಗಳಲ್ಲಿನ ಅಭಿವೃದ್ಧಿಗೆ ಸಚಿವರು ಸಹಕಾರ ನೀಡಬೇಕು ಎಂಬ ಬೇಡಿಕೆಯನ್ನೂ ಮುಖ್ಯಮಂತ್ರಿಗಳ ಬಳಿ ಇಡಲಾಯಿತು. ಇದಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸಕಾರಾತ್ಮಕವಾಗಿ ಸ್ಪಂದಿಸಿದರು ಎನ್ನಲಾಗಿದೆ.

ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್, ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಸೇರಿದಂತೆ ಪಕ್ಷದ ಪರಿಷತ್ ಸದಸ್ಯರು ಪಾಲ್ಗೊಂಡಿದ್ದರು.